ಮೆರಯ್ಯನ ಕೆರೆ ಅಭಿವೃದ್ಧಿ–ರೂ.4.00 ಲಕ್ಷ ಮತ್ತು 7)ಆಲಗೂಡು ಕೆರೆ ಅಭಿವೃದ್ಧಿ–ರೂ.4.00 ಲಕ್ಷ.

ಲೆಕ್ಕಶೀರ್ಷಿಕೆ–2702 ರಡಿ ಜಿಲ್ಲಾ ಪಂಚಾಯತಿಗೆ ನಿಗದಿಯಾದ ರೂ.69.12 ಲಕ್ಷಗಳಲ್ಲಿ, ರೂ.23.04 ಲಕ್ಷ ಬಿಡುಗಡೆಯಾಗಿದ್ದು, ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ ಅನುಷ್ಠಾನಗೊಳಿಸಬೇಕಾಗಿದೆ.

554 ಶ್ರೀ ಸುರೇಶ್ ಬಾಬು ಸಿ.ಬಿ.(ಚಿಕ್ಕನಾಯಕನಹಳ್ಳಿ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಪಶುಸಂಗೋಪನಾ ಇಲಾಖೆಯ ವಿವಿಧ ಪಶುಚಿಕಿತ್ಸಾ ಕೇಂದ್ರ ಮತ್ತು ಪಶು ಆಸ್ಪತ್ರೆಗಳಲ್ಲಿ ಸುಮಾರು 26ಕ್ಕೂ ಅಧಿಕ ಗ್ರೂಪ್ 'ಡಿ' ನೌಕರರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದುವರೆವಿಗೆ ಗ್ರೂಪ್ 'ಡಿ' ನೌಕರರ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು?

ಇ) ಇನ್ನು ಎಷ್ಟು ದಿನಗಳಲ್ಲಿ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನಾ ಸಚಿವರು) :

ಅ) – ಹೌದು –

ಆ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ವಿವಿಧ ಪಶುಸಂಗೋಪನಾ ಸಂಸ್ಥೆಗಳಿಗೆ ಒಟ್ಟು 30 ಡಿ–ದರ್ಜೆ ನೌಕರರ ಹುದ್ದೆಗಳು ಮಂಜೂರಾಗಿದ್ದು, ಅದರಲ್ಲಿ 16 ಹುದ್ದೆಗಳು ಭರ್ತಿಯಾಗಿದ್ದು 14 ಹುದ್ದೆಗಳು ಖಾಲಿ ಇರುತ್ತದೆ. ಸದರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ / ಬಾಹ್ಯ ಮೂಲಕ ಗುತ್ತಿಗೆ ಆಧಾರದ ಮೇರೆಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಶೀಘ್ರವಾಗಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

925 ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಎಷ್ಟು ಪಾಲಿಟೆಕ್ನಿಕ್‌ಗಳ ಕಾಲೇಜುಗಳ ಆರಂಭಕ್ಕೆ ಮಂಜೂರಾತಿ ದೊರೆತಿದೆ;